# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕೋರಮಂಗಲ ಉಪ-ವಿಭಾಗದ ಜಕ್ಕಸಂದ್ರ ವಾರ್ಡ್ ಸಂಖ್ಯೆ-173 ದಿನಾಂಕ: 18-11-2021 ರಂದು ನವೆಂಬರ್-2021 ಮಾಹೆಯ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಶ್ರೀ ಶಿವಣ್ಣ ಬಿ.ಸಿ., ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 173ರ ರವರ ಅಧ್ಯಕ್ಷತೆಯಲ್ಲಿ ಗ್ರಂಥಾಲಯ ಕಟ್ಟಡ, ಉದ್ಯಾನವನ ಹತ್ತಿರ, ಹೆಚ್.ಎಸ್.ಆರ್. 5ನೇ ಸೆಕ್ಟರ್, ಜಕ್ಕಸಂದ್ರ, (ಜಕ್ಕಸಂದ್ರ ವಾರ್ಡ್ ಕಛೇರಿ, ಬಿ.ಬಿ.ಎಂ.ಪಿ) ಬೆಂಗಳೂರು ದಿನಾಂಕ: 18.11.2021 ರಂದು ಮಧ್ಯಾಹ್ನ 2.30 ಗಂಟೆಗೆ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು:

**ಹಾಜರಿದ್ದವರು:-**

1. ಶ್ರೀ ವೆಂಕಟೇಶ್ ರೆಡ್ಡಿ
2. ಶ್ರೀ ಎಂ.ಎ. ಪೊನ್ನಪ್ಪ
3. ಶ್ರೀ ಜಿ. ದಕ್ಷಿಣ ಮೂರ್ತಿ

**ಹಾಜರಿದ್ದ ಅಧಿಕಾರಿಗಳು:-**

1. ಶ್ರೀ ಪ್ರದೀಪ್ ಕುಮಾರ್, ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್-173 ಜಕ್ಕಸಂದ್ರ
2. ಶ್ರೀ ಕೆ. ರಮೇಶ್, ಎ.ಎಸ್.ಐ. ಮಡಿವಾಳ ಪೊಲೀಸ್ ಠಾಣೆ
3. ಶ್ರೀ ಅರವಿಂದ .ಆರ್, ಕಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ ಮಂಜುನಾಥ್ .ಡಿ. ಮಾರ್ಷಲ್
5. ಶ್ರೀ ಶ್ರೀನಿವಾಸ ರೆಡ್ಡಿ
6. ಶ್ರೀ ವೆಂಕಟೇಶಪ್ಪ, ಹೆಚ್.ಎಸ್.ಆರ್. ಸಂಚಾರ ಪೊಲೀಸ್ ಠಾಣೆ

* * * * *

ಶ್ರೀ ಶಿವಣ್ಣ ಬಿ.ಸಿ., ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 173 ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರುಗಳನ್ನು ಹಾಗೂ ವಾರ್ಡ್‌ನ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸಿದರು ಮತ್ತು ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳು, ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲು ತಿಳಿಸಿದರು.

ಶ್ರೀ ದಕ್ಷಿಣ ಮೂರ್ತಿ ರವರು ಮಾತನಾಡಿ, ಟೀಚರ್ಸ್ ಕಾಲೋನಿಯಲ್ಲಿ ಮರಗಳಲ್ಲಿ ಒಣಗಿರುವ ಮತ್ತು ಅಪಾಯಕಾರಿ ರೆಂಬೆ ಕೊಂಬೆಗಳನ್ನು ಕತ್ತರಿಸಬೇಕೆಂದು ಸಭೆಯಲ್ಲಿ ತಿಳಿಸಿದರು.

**ಕ್ರಮ: ಅರಣ್ಯ ಸಂರಕ್ಷಣಾ ಅಧಿಕಾರಿಗಳು**
**ಅರಣ್ಯ ಇಲಾಖೆ, ಬಿ.ಬಿ.ಎಂ.ಪಿ.**

ಶ್ರೀ ಪೊನ್ನಪ್ಪ ರವರು ಮಾತನಾಡಿ, ಜಕ್ಕಸಂದ್ರ 1ನೇ ಮುಖ್ಯರಸ್ತೆ, ಸರ್ಜಾಪುರ ಮುಖ್ಯರಸ್ತೆ ಇಲ್ಲಿ ಬ್ಲಾಕ್ ಸ್ಪಾಟ್‌ಗಳು ನಿರ್ಮಾಣವಾಗಿದ್ದು, ಸಾರ್ವಜನಿಕರಿಗೆ ಹಾಗೂ ಸ್ಥಳೀಯ ನಿವಾಸಿಗಳಿಗೆ ತೊಂದರೆಯಾಗುತ್ತಿರುತ್ತದೆ. ಆದುದರಿಂದ ಬ್ಲಾಕ್ ಸ್ಪಾಟ್‌ಗಳು ನಿರ್ಮಾಣವಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಹಾಗೂ ಕಸ ಎಲ್ಲೆಂದರಲ್ಲಿ ಕಸ ಎಸೆಯುವವರಿಗೆ ದಂಡವನ್ನು ವಿಧಿಸಬೇಕೆಂದು ತಿಳಿಸಿದರು.

ವಾರ್ಡ್‌ನಲ್ಲಿ ಮನೆ ಮನೆಯಲ್ಲಿ ಸಂಗ್ರಹಿಸುವ ಕಸವನ್ನು ಪರಿಣಾಮಕಾರಿಯಾಗಿ ಸಂಗ್ರಹಿಸಬೇಕೆಂದು ತಿಳಿಸಿದರು ಹಾಗೂ ಒಣ ಕಸ ಮತ್ತು ಹಸಿ ಕಸವನ್ನು ಮೂಲದಲ್ಲಿಯೇ ಬೇರ್ಪಡಿಸಬೇಕೆಂದು ಸಭೆಯಲ್ಲಿ ತಿಳಿಸಿದರು.



Scanned by CamScanner

ಶ್ರೀ ಪೊನ್ನಪ್ಪ ರವರು ಮಾತನಾಡಿ, ವಾರ್ಡ್‌ನಲ್ಲಿ ಕಸ ಸಂಗ್ರಹಿಸುವ ವಾಹನಗಳಿಗೆ ಮನೆ ಕಸವನ್ನು ನೀಡದೆ, ರಸ್ತೆಗಳಲ್ಲಿ ಎಸೆಯುವುದು ಕಂಡು ಬಂದಿರುತ್ತದೆ. ಆದುದರಿಂದ ಕಸ ಸಂಗ್ರಹಿಸುವ ವಾಹನಗಳಿಗೆ ಕಸ ನೀಡದಿರುವವರನ್ನು ಕಂಡು ಹಿಡಿಯಲು ಸರ್ವೆ ಮಾಡಬೇಕೆಂದು ತಿಳಿಸಿದರು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**ಘನತ್ಯಾಜ್ಯ ನಿರ್ವಹಣಾ ವಿಭಾಗ, ಬಿ.ಟಿ.ಎಂ. ಲೇಔಟ್**

ರಸ್ತೆಯಲ್ಲಿಯೇ ವಾಹನಗಳಿಂದ ವಾಹನಗಳಿಗೆ ತ್ಯಾಜ್ಯಗಳನ್ನು ವರ್ಗಾಯಿಸುವುದರಿಂದ ರಸ್ತೆಯಲ್ಲಿ ಇತರೆ ವಾಹನ ಸವಾರರಿಗೆ ತೊಂದರೆಯಾಗುತ್ತಿರುತ್ತದೆ. ಆದುದರಿಂದ Transit Point ಅನ್ನು ಬದಲಾವಣೆ ಮಾಡಬೇಕೆಂದು ತಿಳಿಸಿದರು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**ಘನತ್ಯಾಜ್ಯ ನಿರ್ವಹಣಾ ವಿಭಾಗ, ಬಿ.ಟಿ.ಎಂ. ಲೇಔಟ್**

ಮಳೆಗಾಲದ ಸಂದರ್ಭದಲ್ಲಿ ಪೊಲೀಸ್ ಕ್ವಾಟ್ರಸ್‌ನಿಂದ ಬರುವ ಮಳೆ ನೀರು ಹೆಚ್ಚಾಗಿ ಬರುವ ಕಾರಣ, ಸದರಿ ಸ್ಥಳದಲ್ಲಿರುವ ಚರಂಡಿಯನ್ನು ಬದಲಾವಣೆ ಮಾಡಬೇಕೆಂದು ತಿಳಿಸಿದರು.

ಶ್ರೀ ಪೊನ್ನಪ್ಪ ರವರು ಮಾತನಾಡಿ ಈ ಕೆಳಕಂಡ ಸಮಸ್ಯೆಗಳ ಬಗ್ಗೆ ಚರ್ಚಿಸಿದರು.

- 14ನೇ ಮುಖ್ಯರಸ್ತೆಯಲ್ಲಿರುವ ಚರಂಡಿಯನ್ನು ರಸ್ತೆ ಮೂಲಭೂತ ಸೌಕರ್ಯ ಸಹಾಯಕ ಅಭಿಯಂತರರೊಡನೆ ಪರಿಶೀಲಿಸಲು ಕೋರಲಾಯಿತು.
- 14ನೇ ಮುಖ್ಯರಸ್ತೆಯಲ್ಲಿ ಅಪೂರ್ಣಗೊಂಡಿರುವ ಪಾದಚಾರಿ ಮಾರ್ಗ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ಸಭೆಗೆ ತಿಳಿಸಿದರು.
- 14ನೇ ಮುಖ್ಯರಸ್ತೆಯಲ್ಲಿ ಕಿಚನ್ ಬಿಲ್ಡಿಂಗ್ ಹತ್ತಿರ ಪಾದಚಾರಿಗಳು ಸಂಚರಿಸುವ ಸಲುವಾಗಿ ಪಾದಚಾರಿ ಮಾರ್ಗವನ್ನು ನಿರ್ಮಾಣ ಮಾಡಬೇಕೆಂದು ತಿಳಿಸಿದರು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**ರಸ್ತೆ ಮೂಲಭೂತ ಸೌಕರ್ಯ**

- ಅಗರ ಬ್ರಿಡ್ಜ್ ಬಳಿ ಇರುವ ಬೃಹತ್ ಮಳೆನೀರುಗಾಲುವೆಯಲ್ಲಿ ತುಂಬಿರುವ ಹೂಳನ್ನು ತೆರವುಗೊಳಿಸುವಂತೆ ಸಭೆಯಲ್ಲಿ ತಿಳಿಸಿದರು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**ಬೃಹತ್ ಮಳೆನೀರುಗಾಲುವೆ**

- 14ನೇ ಮುಖ್ಯರಸ್ತೆಯಲ್ಲಿರುವ ರಸ್ತೆ ದೀಪಗಳು ಹದಗೆಟ್ಟಿರುತ್ತದೆ. ಆದುದರಿಂದ ಹದಗೆಟ್ಟಿರುವ ರಸ್ತೆ ದೀಪಗಳನ್ನು ಸರಿಪಡಿಸಬೇಕೆಂದು ತಿಳಿಸಿದರು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**ವಿದ್ಯುತ್ ವಿಭಾಗ, ಬಿ.ಬಿ.ಎಂ.ಪಿ.**

- 13ನೇ ಮುಖ್ಯರಸ್ತೆಯಲ್ಲಿ Wet Mix ಹಾಕುವುದು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**ಕೋರಮಂಗಲ ಉಪವಿಭಾಗ**



Scanned by CamScanner

* 11ನೇ ಮುಖ್ಯರಸ್ತೆಯಲ್ಲಿ ಕುಡಿಯುವ ನೀರಿನ ಟ್ಯಾಂಕರ್‌ಗಳು ಹೆಚ್ಚಾಗಿ ಸಂಚರಿಸುವುದರಿಂದ ಸದರಿ ರಸ್ತೆಯನ್ನು One way ಮಾರ್ಗವನ್ನಾಗಿ ಬದಲಾಯಿಸಬೇಕೆಂದು ಸಭೆಗೆ ತಿಳಿಸಿದರು.

**ಕ್ರಮ: ಆರಕ್ಷಕ ನಿರೀಕ್ಷಕರು**
**ಸಂಚಾರ ಪೊಲೀಸ್ ಠಾಣೆ, ಮಡಿವಾಳ**

* ಹೆಚ್.ಎಸ್.ಆರ್. ಲೇಔಟ್‌ನಲ್ಲಿ ಕೊಳಚೆ ನೀರು ನಿರ್ವಹಣೆಯನ್ನು ಮಾಡಲು ಯೋಜನೆಯನ್ನು ಕೈಗೊಳ್ಳುವಂತೆ ತಿಳಿಸಿದರು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**ನೀರಿನ ತ್ಯಾಜ್ಯ ನಿರ್ವಹಣೆ**

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಅಧಿಕಾರಿಗಳಿಗೆ ವಂದನೆಗಳನ್ನು ತಿಳಿಸುತ್ತಾ, ಇಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಮುಂದಿನ ಸಭೆಯಲ್ಲಿ ಪೂರ್ಣ ಮಾಹಿತಿಯನ್ನು ಒದಗಿಸಬೇಕೆಂದು ಸದಸ್ಯ ಕಾರ್ಯದರ್ಶಿ ಮತ್ತು ಸಭೆಯಲ್ಲಿ ಹಾಜರಾಗಿದ್ದ ಎಲ್ಲಾ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

18/11/2021

(ಶ್ರೀ. ಪ್ರದೀಪ್ ಕುಮಾರ್ .ಆರ್)
ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್–173 ಜಕ್ಕಸಂದ್ರ



Scanned by CamScanner



Scanned by CamScanner



Scanned by CamScanner

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನಂ.ಸ.ಕಾ.ನಿ.ಅ./ಕೋ.ಉ.ವಿ/ಪಿ.ಆರ್/27/2021-22

ಸಹಾಯಕ ಕಾರ್ಯಪಾಲಕ ಅಭಿಯಂತರರರ ಕಛೇರಿ,
ಕೋರಮಂಗಲ ಉಪವಿಭಾಗ,
ಪಾಲಿಕೆ ಕಟ್ಟಡಗಳು, 2ನೇ ಅಡ್ಡರಸ್ತೆ,
5ನೇ ಬ್ಲಾಕ್, ಕೋರಮಂಗಲ,
ಬೆಂಗಳೂರು. ದಿನಾಂಕ: 17/11/2021

## ಸಭೆ ಸೂಚನಾ ಪತ್ರ

ಮಾನ್ಯ ಆಯುಕ್ತರು ರವರ ಕಛೇರಿ ಆದೇಶ ಸಂಖ್ಯೆ.ಬಿ12(5)/ಪಿಆರ್/35/2020-21, ದಿನಾಂಕ:21-09-2020ರ ರೀತ್ಯಾ ವಾರ್ಡ್ ಸಂಖ್ಯೆ.173 (ಜಕ್ಕಸಂದ್ರ) ವ್ಯಾಪ್ತಿಯ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ **ದಿನಾಂಕ:18.11.2021 ರಂದು ಮಧ್ಯಾಹ್ನ2.30 ಕ್ಕೆ ಸ್ಥಳ: ಗ್ರಂಥಾಲಯ ಕಟ್ಟಡ, ಉದ್ಯಾನವನ ಹತ್ತಿರ, ಹೆಚ್.ಎಸ್.ಆರ್. 5ನೇ ಸೆಕ್ಟರ್, ಜಕ್ಕಸಂದ್ರ, (ಜಕ್ಕಸಂದ್ರ ವಾರ್ಡ್ ಕಛೇರಿ, ಬಿ.ಬಿ.ಎಂ.ಪಿ) ಬೆಂಗಳೂರು** ಇಲ್ಲಿ ವಾರ್ಡ್‌ಗೆ ಸಂಬಂಧಪಟ್ಟ ಕುಂದುಕೊರತೆಗಳ ಬಗ್ಗೆ ಚರ್ಚಿಸಲು ವಾರ್ಡ್ ಸಮಿತಿ ಸಭೆಯನ್ನು ನಡೆಸಲು ನಿರ್ಧರಿಸಲಾಗಿದ್ದು, ಸದರಿ ದಿನಾಂಕದಂದು ತಾವುಗಳು ತಪ್ಪದೇ ಹಾಜರಾಗಲು ಈ ಮೂಲಕ ತಿಳಿಸಲಾಗಿದೆ ಹಾಗೂ ಹಿಂದಿನ ಸಭೆಯ ನಡವಳಿಯನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದ್ದು, ತಮ್ಮ ವ್ಯಾಪ್ತಿಗೆ ಬರುವಂತಹ ವಿಷಯಗಳ ಬಗ್ಗೆ ಅನುಷ್ಠಾನ ವರದಿಯೊಂದಿಗೆ ಸಭೆಗೆ ಹಾಜರಾಗಲು ಕೋರಿದೆ. ತಮ್ಮ ಗೈರುಹಾಜರಿಯ ಬಗ್ಗೆ ಮಾನ್ಯ ಆಯುಕ್ತರು ರವರ ಗಮನಕ್ಕೆ ತರಲಾಗುವುದು.

ಕಾರ್ಯದರ್ಶಿ, ವಾರ್ಡ್ ಸಮಿತಿ & ಸಹಾಯಕ ಅಭಿಯಂತರರು
ವಾರ್ಡ್ ನಂ.173 ಜಕ್ಕಸಂದ್ರ

ಪ್ರತಿಯನ್ನು:-

1. ಜಂಟಿ ಆಯುಕ್ತರು, ದಕ್ಷಿಣ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು, ದಕ್ಷಿಣ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು, ಬಿ.ಟಿ.ಎಂ. ಲೇಔಟ್, ಬಿ.ಬಿ.ಎಂ.ಪಿ
4. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ. ವಲಯ ರವರಿಗೆ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ಬಿ.ಟಿ.ಎಂ. ಲೇಔಟ್ ವಿಭಾಗ ರವರಿಗೆ ಸಲ್ಲಿಸುತ್ತಾ, ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಹಾಗೂಘನತ್ಯಾಜ್ಯ ನಿರ್ವಹಣೆಯ ಗುತ್ತಿಗೆದಾರರೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
7. ಸಹ ಕಂದಾಯ ಅಧಿಕಾರಿಗಳು, ಕಂದಾಯ ಇಲಾಖೆ, ಕೋರಮಂಗಲ
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. ಬೆಂಗಳೂರು.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೀದಿ ದೀಪಗಳ ನಿರ್ವಹಣೆ, ಬಿ.ಬಿ.ಎಂ.ಪಿ
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಬೆಂಗಳೂರು
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ದಕ್ಷಿಣ ವಲಯ , ಬೆಂಗಳೂರು
12. ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ದಕ್ಷಿಣ ವಲಯ, ಬೆಂಗಳೂರು.
13. ಆರಕ್ಷಕ ನಿರೀಕ್ಷಕರು, ಮಡಿವಾಳ ಪೋಲಿಸ್ ಠಾಣೆ ರವರಿಗೆ ಸಲ್ಲಿಸಿ, ಸಭೆಗೆ ತಪ್ಪದೇ ಹಾಜರಿರಲು ಕೋರಿದೆ.
14. ಆರಕ್ಷಕ ನಿರೀಕ್ಷಕರು, ಸಂಚಾರ ಪೋಲಿಸ್ ಠಾಣೆ, ಮಡಿವಾಳ ರವರಿಗೆ ಸಲ್ಲಿಸಿ, ಸಭೆಗೆ ತಪ್ಪದೇ ಹಾಜರಿರಲು ಕೋರಿದೆ.
15. ರೆಸಿಡೆನ್ಶಿಯಲ್ ವೆಲ್‌ಫೇರ್ ಅಸೋಸಿಯೇಷನ್, ಜಕ್ಕಸಂದ್ರ ವಾರ್ಡ್-173
16. ಕಛೇರಿ ಕಡತಕ್ಕೆ.

Scanned by CamScanner

ವಾರ್ಡ್ ಸಭೆ - 18/11/2021

classmate
Date
Page

## ಹಾಜರಿದ್ದ ಅಧಿಕಾರಿಗಳು

1) K. Ramesh ASI Madivala Police Station -
2 Aravinda. R JHI
Manjunath. D Marshal
3 Srinivasa Reddy
4 Eshwaradithan Charanfincwt -
5 Venkatappa HSR TR PS -

## ಹಾಜರಿದ್ದ ಸದಸ್ಯರುಗಳು

1 Venkatesh Reddy
2 M. A. Ponnappa
3 G. DAKSHANA MORTHY
4 C. Narasimhulu (BBMP (Mestri)
5) Sanjeev Kumar ( " " )

Scanned by CamScanner